# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ ಶಿವಾಜಿನಗರ ಉಪವಿಭಾಗ ಹಲಸೂರು ಕೆರೆರಸ್ತೆ, ಬೆಂಗಳೂರು-42

---

ಸಂಖ್ಯೆ:ಸ.ಇಂ/ವಾ-91/ವಾರ್ಡ್‌ಸಭೆ/ 18 /2021-22 ದಿನಾಂಕ:08-10-2021

## ವಾರ್ಡ್-91 ರ ವಾರ್ಡ್ ಸಭೆಯ ನಡವಳಿ

ದಿನಾಂಕ: 08-10-2021 ರಂದು ಶಿವಾಜಿನಗರ ಉಪ ವಿಭಾಗ ವಾರ್ಡ್-91, ಭಾರತಿನಗರ ವಾರ್ಡ್ ಕಛೇರಿಯಲ್ಲಿ ಶ್ರೀ.ರವಿ, ವಾರ್ಡ್-91 ರ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭಾ ನಡವಳಿ.

**ಹಾಜರಿದ್ದವರು:**

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ.ರವಿ | ಸಹಾಯಕ ನಿಯಂತ್ರಕರು (ಹಣಕಾಸು-ದಕ್ಷಿಣ) ಹಾಗೂ ನೋಡಲ್ ಅಧಿಕಾರಿ ವಾರ್ಡ್-91 |
| 2 | ಶ್ರೀ ಸೈಫುದ್ದಿನ್, | ಸಕಾನಿಅ ಶಿವಾಜಿನಗರ ಉಪ ವಿಭಾಗ |
| 3 | ಶ್ರೀ ನವೀನ್ ಕುಮಾರ್ | ಆರೋಗ್ಯ ವೈದ್ಯಾಧಿಕಾರಿ, ಶಿವಾಜಿನಗರ ವಲಯ |
| 4 | ಶ್ರೀ ಜ್ಯೋತಿ ಲಕ್ಷ್ಮೀ | ಸ.ಕ.ಅ(ಶಿವಾಜಿನಗರ) |
| 5 | ಶ್ರೀ ಪ್ರವೀಣ್.ಎನ್.ಎಂ, | ಸಅ ಹಾಗೂ ಕಾರ್ಯದರ್ಶಿ ಮತ್ತು ಸಂಚಾಲಕರು ವಾರ್ಡ್ ಸಂಖ್ಯೆ:91 |
| 6 | ಶ್ರೀ ಜಾವೀದ್ | ಸಕಾನಿಅ(ಘ.ತ್ಯಾ.ನಿ) ಶಿವಾಜಿನಗರ ವಿಭಾಗ (ಪ್ರಭಾರೆ) |
| 7 | ಶ್ರೀ ಸತೀಶ್, | ಕಂದಾಯ ಪರಿವೀಕ್ಷಕರು |
| 8 | ಶ್ರೀ ರಾಜೇಶ್, | ಸ.ಅ(ಬಿ.ಡಬ್ಲ್ಯೂ.ಎಸ್.ಎಸ್.ಬಿ) |
| 9 | ಶ್ರೀ ಲಕ್ಷ್ಮಣ್, | ಸ.ಅ(ಬೆಸ್ಕಾಂ) |
| 10 | ಶ್ರೀ ಆಕಾಶ್ | ಗುತ್ತಿಗೆ ಕಿರಿಯ ಆರೋಗ್ಯ ಪರಿವೀಕ್ಷಕರು |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳ / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಬಿಸಲಾಯಿತು.

1) **ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-** ಶಿವಾಜಿನಗರ ಉಪ ವಿಭಾಗದ ವಾರ್ಡ್ ಸಂಖ್ಯೆ:91ರ ವ್ಯಾಪ್ತಿಯಲ್ಲಿ ಸಾರ್ವಜನಿಕರ ಆರೋಗ್ಯ ಕೇಂದ್ರದ ವೈಧ್ಯಾಧಿಕಾರಿಗಳು ಕೋವಿಡ್ ಪರೀಕ್ಷೆಯ ವಿವರಗಳನ್ನು ಸಭೆಗೆ ಈ ಕೆಳಕಂಡಂತೆ ವಿವರಗಳನ್ನು ನೀಡಿದರು.

- ನೋಡಲ್ ಅಧಿಕಾರಿರವರು ಮಾತಾನಾಡುತ್ತ ಕಸವಿಲೇವಾರಿ ಸಮರ್ಪಕವಾಗಿ ನಡೆಯದೇ ಇರುವುದು ಕಂಡುಬಂದಿದ್ದು, ಸಾರ್ವಜನಿಕರಿಂದ ದೂರುಗಳು ಬಂದಿರುತ್ತದೆ. ಆದ್ದುದರಿಂದ ಕಸ ವಲೇವಾರಿ ಬಗ್ಗೆ ಆದಷ್ಟು ಗಮನವಹಿಸಿ ಸಮರ್ಪಕವಾಗಿ ಕೆಲಸ ನಿರ್ವಹಿಸಲು ಸೂಚಿಸಿದೆ. ಇದಕ್ಕೆ ಸಂಬಂಧಪಟ್ಟ ಅಧಿಕಾರಿಗಳ ವಿವರ ಈ ಕೆಳಕಂಡಂತಿದೆ.

<u>ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ಶಿವಾಜಿನಗರ ವಿಭಾಗ</u>

- ವಾರ್ಡ್ ಪ್ರದೇಶದ ರಸ್ತೆಗಳಲ್ಲಿ ಮತ್ತು ಪಾದಚಾರಿ ರಸ್ತೆಗಳಲ್ಲಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸ್‌ನ್ನು ರಾತ್ರಿ ಹೊತ್ತಿನಲ್ಲಿ ಸುರಿಯುತ್ತಿದ್ದು, ಇದರಿಂದ ಸಾರ್ವಜನಿಕರಿಗೆ ಹಾಗೂ ಪಾದಚಾರಿಗಳಿಗೆ ಒಡಾಡಲು ತುಂಬಾ ತೊಂದರೆಯುಂಟಾಗುತ್ತಿರುತ್ತದೆ, ಆದುದರಿಂದ ಸದರಿ ಮಣ್ಣು ಮತ್ತು ಅನುಪಯುಕ್ತ ಡೆಬ್ರೀಸನ್ನು ತೆರವುಗೊಳಿಸಲು ಅವಶ್ಯ ಕ್ರಮ ಕೈಗೊಳ್ಳಲು ಕೋರಿರುತ್ತಾರೆ. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಸಹಾಯಕ ಕಾರ್ಯಪಾಲಕ ಅಭಿಯಂತರರು ಮಾತನಾಡುತ್ತಾ, ಸದರಿ ವಿಷಯದ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿರುತ್ತಾರೆ.

- ನೋಡಲ್ ಅಧಿಕಾರಿರವರು ಮಾತನಾಡಿ, ರಸಲ್ ಮಾರ್ಕೆಟ್ ರಸ್ತೆಯಲ್ಲಿರುವ (Major Roads) ರಸ್ತೆಗುಂಡಿಗಳನ್ನು ಶೀಘ್ರವಾಗಿ ದುರಸ್ಥಿಪಡಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಸೂಚಿಸಲು ಹಾಗೂ ಸ್ಮಾರ್ಟ್ ಸಿಟಿ ಸಂಸ್ಥೆ ವತಿಯಿಂದ ನಿರ್ವಹಿಸಲಾಗುತ್ತಿರುವ ಕೆಲಸ ಕಾರ್ಯಗಳನ್ನು ಅತೀ ವೇಗವಾಗಿ ನಿರ್ವಹಿಸುವಂತೆ ಸಂಬಂಧಪಟ್ಟವರಿಗೆ ಸೂಚಿಸಲು ತಿಳಿಸಿದರು.
- ನೋಡಲ್ ಅಧಿಕಾರಿರವರು ಮಾತಾನಾಡುತ್ತ ರಸ್ತೆಯಲ್ಲಿರುವ Pot Holes ಮುಚ್ಚುವ ಕಾರ್ಯವನ್ನು ಮಳೆಯು ಹೆಚ್ಚಾಗಿರುವ ಕಾರಣ ಗುಂಡಿಯಲ್ಲಿ ನೀರು ತುಂಬಿ ಅಪಘಾತಗಳು ಹೆಚ್ಚಾಗುವ ಸಾಧ್ಯತೆ ಇರುವುದರಿಂದ ಈ ಕೂಡಲೇ Pot Holes ಗಳನ್ನು ಗುರುತಿಸಿ ಮುಚ್ಚುವ ಕಾರ್ಯವನ್ನು ನಿರ್ವಹಿಸಲು ಸೂಚಿಸಿರುತ್ತಾರೆ.
- ನೋಡಲ್ ಅಧಿಕಾರಿಗಳು ಮಾತಾನಾಡುತ್ತ ತಿಳಿಸಿದರು ಬೀದಿನಾಯಿಗಳ ಹಾವಳಿ ಹೆಚ್ಚಾಗಿದ್ದು ಸಾರ್ವಜನಿಕರಿಂದ ದೂರುಬಂದಿದ್ದು ಹಲವಾರು ಮಕ್ಕಳಿಗೆ ನಾಯಿ ಕಚ್ಚಿರುವುದು ಕಂಡುಬಂದಿದೆ ಮಕ್ಕಳನ್ನು ಆಟವಾಡಲು ಬಿಡಲು ಹೆದರುವ ಪರಿಸ್ಥಿತಿ ಬಂದಿರುವುದಾಗಿ ದೂರು ದಾಖಲಿಸಿರುವ ಹಿನ್ನೆಲೆ ಮುಂದಿನ ಸೂಕ್ತ ಕ್ರಮ ಈ ಕೂಡಲೇ ತೆಗೆದುಕೊಳ್ಳಲು ಸಂಬಂಧಪಟ್ಟ ಅಧಿಕಾರಿರವರಿಗೆ ತಿಳಿಸಿದರು.
- ನೋಡಲ್ ಅಧಿಕಾರಿರವರು ಮಾತಾನಾಡುತ್ತ ದಿನನಿತ್ಯದ ಕಸವನ್ನು ಸರಿಯಾದ ರೀತಿಯಲ್ಲಿ Segrigation ಆಗುತ್ತಿಲ್ಲದಿರುವುದು ಅವರ ಗಮನಕ್ಕೆ ಬಂದಿದ್ದು ಸಂಬಂಧಪಟ್ಟ ಅಧಿಕಾರಿಗಳು ಕೂಡಲೇ ಕ್ರಮವಹಿಸಲು ಸೂಚಿಸಲಾಗಿದೆ.
- ವಾರ್ಡ್ ಸಂಖ್ಯೆ: 92 ರಲ್ಲಿ ಮಳೆಯ ಅಭಾವದಿಂದ ಮರಗಳು ಬಿದ್ದು ಬೀದಿಕಂಬಗಳು ಮತ್ತು ವಾಹನ ಸಂಚಾರಕ್ಕೆ ಅಡ್ಡಿಯಾಗುವುದು ಮತ್ತು ಸಾರ್ವಜನಿಕರು ಓಡಾಡುವಾಗ ಪ್ರಾಣ ಹಾನಿಯಾಗುವ ಸಂಬವ ಹೆಚ್ಚಿರುವುದರಿಂದ ಮರಗಳ ರೆಂಬೆ ಕೊಂಬೆಗಳನ್ನು ಕಡಿಯಲು ಮತ್ತು ಹಾಕಿಸಲು ಇದಕ್ಕೆ ಸಂಬಂಧ ಪಟ್ಟ ಅಧಿಕಾರಿಗಳು ಮುಂದಿನ ಕ್ರಮ ತೆಗೆದುಕೊಳ್ಳಲು ಬೆಸ್ಕಾಂ ರವರಿಗೆ ಸೂಚಿಸಿರುತ್ತಾರೆ.
- ನೋಡಲ್ ಅಧಿಕಾರಿರವರು ಮಾತಾನಾಡುತ್ತ ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಹಾಕಿರುವ (OFC) ಕೇಬಲ್‌ಗಳನ್ನು ಕೂಡಲೇ ತೆರವುಗೊಳಿಸಿ, ಸಂಬಂಧಪಟ್ಟ ಸಂಸ್ಥೆಯವರ ಮೇಲೆ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸಲು ತಿಳಿಸಿದರು.

ಅಂತಿಮವಾಗಿ ನೋಡಲ್ ಅಧಿಕಾರಿರವರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ತೆಗೆದುಕೊಂಡು ಎಲ್ಲಾ ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಕಾರ್ಯದರ್ಶಿಯವರು ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡಲ್ ಅಧಿಕಾರಿರವರ ಸೂಚನೆಗಳಂತೆ ಸಹಿ ಮಾಡಿ ಮಂಡಿಸಿದೆ.

(ಪ್ರವೀಣ್.ಎನ್.ಎಂ)
ಸ.ಅ & ಕಾರ್ಯದರ್ಶಿ
ವಾರ್ಡ್-91, ಭಾರತೀನಗರ